# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1747
2. ಸದಸ್ಯರ ಹೆಸರು : ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 14.03.2022
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರಿ ನೌಕರರಿಗೆ ವೈದ್ಯಕೀಯ ವೆಚ್ಚ ಮರುಪಾವತಿ ಮಾಡಲು ಸರ್ಕಾರ ಅನುಸರಿಸುತ್ತಿರುವ ದರಪಟ್ಟಿ ಯಾವ ದಿನಾಂಕದಂದು ನಿಗದಿಪಡಿಸಲಾಗಿದೆ; | ದಿನಾಂಕ: 24.10.2009ರ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 2 ಎಸ್‌ಎಂಆರ್ 2008ರನ್ವಯ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 14ಕ್ಕೆ ಮಾಡಿರುವ ತಿದ್ದುಪಡಿಯಂತೆ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಷರತ್ತುಗಳನ್ನು ಪೂರೈಸುವುದರ ನಿಬಂಧನೆಗಳಿಗೆ ಒಳಪಟ್ಟು ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು, "ಕೇಂದ್ರ ಸರ್ಕಾರದ ಆರೋಗ್ಯ ಸೇವೆಗಳು (CGHS)" ಅಡಿಯಲ್ಲಿ ಕಾಲಕಾಲಕ್ಕೆ ವಿವಿಧ ರೋಗ ನಿರ್ಣಯ ವಿಧಾನಗಳಿಗೆ ಮತ್ತು ಚಿಕಿತ್ಸೆಗಳಿಗೆ ನಿಗದಿಪಡಿಸುವ ದರಗಳನ್ನು ನಿಗದಿಪಡಿಸಲಾಗಿದೆ. |
| ಆ) | ಸದರಿ ದರಪಟ್ಟಿಯನ್ನು ಎಷ್ಟು ವರ್ಷಗಳಿಗೊಮ್ಮೆ ಪರಿಷ್ಕರಿಸಲಾಗುತ್ತಿದೆ; | ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು, "ಕೇಂದ್ರ ಸರ್ಕಾರದ ಆರೋಗ್ಯ ಸೇವೆಗಳು (CGHS)" ರಡಿಯಲ್ಲಿ CGHS ದರಪಟ್ಟಿಯನ್ನು ನಿರ್ವಹಿಸುತ್ತಿದೆ ಹಾಗೂ ಕಾಲಕಾಲಕ್ಕೆ ಪರಿಷ್ಕರಿಸುತ್ತದೆ. |
| ಇ) | ಸದರಿ ದರಪಟ್ಟಿ ಮತ್ತು ಪ್ರಸ್ತುತ ಆಸ್ಪತ್ರೆಯ ದರಪಟ್ಟಿಗಳಿಗೂ ಬಹಳ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಈ) | ಸದರಿ ದರಪಟ್ಟಿಯನ್ನು ಪರಿಷ್ಕರಿಸಲು ಸರ್ಕಾರ ಇಚ್ಛಿಸಿದೆಯೇ; ಇಚ್ಛಿಸಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಪರಿಷ್ಕರಿಸಲಾಗುವುದು? | ಮೇಲೆ (ಆ) ರಲ್ಲಿನ ವಿವರಣೆಯ ಹಿನ್ನೆಲೆಯಲ್ಲಿ ಉದ್ಭವಿಸುವುದಿಲ್ಲ. |

ಇ-ಕಡತ ಸಂಖ್ಯೆ: DPAR/39/SMR/2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ